# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು - 572 103


ಸಂಖ್ಯೆ:ತುವಿ:ಶೈವಿ:2023–24:/792 ದಿನಾಂಕ:06.06.2023

## ಸುತ್ತೋಲೆ

ವಿಷಯ:2023–24ನೇ ಶೈಕ್ಷಣಿಕ ಸಾಲಿಗೆ ವಿವಿಧ ಸ್ನಾತಕ ಪದವಿಗಳ ಶೈಕ್ಷಣಿಕ ವೇಳಾಪಟ್ಟಿಯ ಕುರಿತು

ಉಲ್ಲೇಖ: 1) ಈ ಕಚೇರಿ ಅಧಿಸೂಚನೆ ಸಂಖ್ಯೆ: ತುವಿ:ಶೈವಿ:2022–23/5012 ದಿನಾಂಕ:01.02.2023
2) ಸರ್ಕಾರದ ಆದೇಶ ಸಂಖ್ಯೆ: ಇಡಿ 80 ಯುಎನ್ಇ 2023 ದಿನಾಂಕ: 23.05.2023
3) ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 05.06.2023

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2023–24ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕ ಪದವಿಗಳ ಶೈಕ್ಷಣಿಕ ವೇಳಾಪಟ್ಟಿಯ ಕುರಿತಂತ ಉಲ್ಲೇಖ(2)ರ ಸರ್ಕಾರದ ಆದೇಶ ಸ್ವೀಕೃತಗೊಂಡಿರುತ್ತದೆ. ಅದರಂತೆ, ವಿದ್ಯಾರ್ಥಿವೇತನ, ಫಲಿತಾಂಶ ಪ್ರಕಟಣೆ ಇತ್ಯಾದಿ ಶೈಕ್ಷಣಿಕ ಕಾರಣಗಳಿಂದ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಏಕರೂಪದ ಶೈಕ್ಷಣಿಕ ವೇಳಾಪಟ್ಟಿ ಹೊಂದಿರಬೇಕಾಗಿರುತ್ತದೆ. ಅದರಂತೆ 2023–24ನೇ ಶೈಕ್ಷಣಿಕ ಸಾಲಿನ ಪ್ರಥಮ ಸೆಮಿಸ್ಟರ್ ತರಗತಿಗಳನ್ನು ಆದ್ಯತೆಯ ಮೇರೆಗೆ ಆರಂಭಿಸಬೇಕಾಗಿರುತ್ತದೆ. ಆದರೆ, ತುಮಕೂರು ವಿಶ್ವವಿದ್ಯಾನಿಲಯದಲ್ಲಿ ಈಗಾಗಲೇ 2022–23ನೇ ಶೈಕ್ಷಣಿಕ ವೇಳಾಪಟ್ಟಿಯನ್ನು ಉಲ್ಲೇಖ(1)ರಂತೆ ಅಧಿಸೂಚಿಸಲಾಗಿದ್ದು, ಅದರಂತೆ ತರಗತಿಗಳು ನಡೆಯುತ್ತಿದ್ದು, 2, 4 ಮತ್ತು 6ನೇ ಸೆಮಿಸ್ಟರ್ ತರಗತಿಗಳು 19.08.2023ರಂದು ಮುಕ್ತಾಯಗೊಳ್ಳಬೇಕಿದೆ.

ಈ ಹಿನ್ನೆಲೆಯಲ್ಲಿ ಚುನಾವಣಾ ಕಾರ್ಯ ಮತ್ತು ಮೌಲ್ಯಮಾಪನ ಕಾರ್ಯಗಳಿಂದಾಗಿ ತರಗತಿಗಳನ್ನು ತೆಗೆದುಕೊಳ್ಳಲು ಸಾಧ್ಯವಾಗದಿದ್ದಲ್ಲಿ, ತತ್ಸಂಬಂಧ ಬದಲಿ ವಿಶೇಷ ತರಗತಿಗಳನ್ನು ತೆಗೆದುಕೊಂಡು ಉಲ್ಲೇಖ(1)ರ ಈ ಕಚೇರಿ ಅಧಿಸೂಚನೆಯನ್ವಯ ತರಗತಿಗಳನ್ನು ತಪ್ಪದೆ ಪೂರ್ಣಗೊಳಿಸುವಂತೆ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಈಗಾಗಲೇ ಅಧಿಸೂಚಿಸಿರುವ ಶೈಕ್ಷಣಿಕ ವೇಳಾಪಟ್ಟಿಯಲ್ಲಿ ಯಾವುದೇ ಬದಲಾವಣೆಗೆ ಅವಕಾಶವಿರುವುದಿಲ್ಲ ಎಂದು ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ,

Mangalahouri M.

ಉಪಕುಲಸಚಿವರು

ಉಪಕುಲ ಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

ಪ್ರಾಂಶುಪಾಲರು, ಘಟಕ ಹಾಗೂ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು

ಪ್ರತಿಗಳು:

1. ಕುಲಸಚಿವರು (ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಸಿಸ್ಟಂ ಅನಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ಜಾಲತಾಣದಲ್ಲಿ ಪ್ರಕಟಿಸುವುದು ಮತ್ತು ಎಲ್ಲಾ ಕಾಲೇಜುಗಳ ಪ್ರಾಂಶುಪಾಲರಿಗೆ ಇ-ಮೇಲ್ ಕಳುಹಿಸುವುದು.
3. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕಚೇರಿ ಪ್ರತಿ.